**ಸಾಕ್ಷಿಗೆ ದಿನಾಂಕ 09-02-2026 ರಂದು -ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆ: ಅರ್ಜಿದಾರರ ಪರ ಶ್ರೀ ಹೆಚ್ ಎಸ್ ಕೆ ವಕೀಲರಿಂದ:**

**1.** ನಾನು ಮೈಸೂರಿನ ಜೆ ಎಸ್ ಎಸ್ ಆಸ್ಪತ್ರೆಯಲ್ಲಿ ಎಂ ಆರ್ ಟಿ ಆಗಿದ್ದು, ಅರ್ಜಿದಾರರ ಪರ ಸಾಕ್ಷಿಯಾಗಿರುತ್ತೇನೆ. ನನ್ನ ಮುಖ್ಯ ವಿಚಾರಣೆ ಸಾಕ್ಷ್ಯಕ್ಕೆ ಸಂಬಂಧಿಸಿದಂತೆ, ನಾನು ಈ ದಿನ ಪ್ರಮಾಣ ಪತ್ರವನ್ನು ಸಲ್ಲಿಸುತ್ತಿದ್ದೇನೆ. ಅದರಲ್ಲಿರುವ ಅಂಶಗಳು ಸತ್ಯವಾಗಿರುತ್ತವೆ. ಅದನ್ನು ನಾನು ಓದಿ ತಿಳಿದುಕೊಂಡು ಸಹಿಮಾಡಿರುತ್ತೇನೆ.

**2.** ನಾನು ಈ ಪ್ರಕರಣದಲ್ಲಿ ತೆಗೆದುಕೊಂಡಿರುವ ನಿಲುವಿಗೆ ಸಂಬಂಧಿಸಿದಂತೆ ಈ ಕೆಳಕಂಡ ದಾಖಲೆಗಳನ್ನು ಹಾಜರು ಮಾಡುತ್ತಿದ್ದೇನೆ. ಸಾಕ್ಷಿಹಾಜರು ಮಾಡಿದ ದಾಖಲಾತಿಗಳನ್ನು ಈ ಕೆಳಕಂಡಂತೆ ನಿಶಾನಿಕರಿಸಲಾಗಿರುತ್ತದೆ:

| | |
|---|---|
| ನಿ.ಪಿ.34 | ಅಧಿಕಾರ ಪತ್ರ |
| ನಿ.ಪಿ.35 | ಕೇಸ್ ಶೀಟ್ |

**ಪಾಟೀ ಸವಾಲು: 2ನೇ ಎದುರುದಾರರ ಪರ ಶ್ರೀ ಎನ್ ಎಂ ಪಿ ವಕೀಲರಿಂದ:**

**1.** ನಾನು ಹಾಜರುಪಡಿಸಿರುವ ದಾಖಲೆಗಳ ಬಗ್ಗೆ ನನಗೆ ವೈಯಕ್ತಿಕ ಮಾಹಿತಿ ಇರುವುದಿಲ್ಲ. ದಿ:**21.12.2023** ರಂದು ಅರ್ಜಿದಾರರು ನಮ್ಮ ಆಸ್ಪತ್ರೆಗೆ ದಾಖಲಾಗಿರುತ್ತಾರೆ. ಅರ್ಜಿದಾರರು ಮುಂದುವರೆದ ಚಿಕಿತ್ಸೆ ಪಡೆದುಕೊಂಡ ಬಗ್ಗೆ ನನಗೆ ಮಾಹಿತಿ ಇಲ್ಲ. ದಿ:**23.12.2023** ರಂದು ಅರ್ಜಿದಾರರು ನಮ್ಮ ಆಸ್ಪತ್ರೆಯಿಂದ ಬಿಡುಗಡೆಯಾಗಿರುತ್ತಾರೆ. ಅರ್ಜಿದಾರರಿಗೆ ಸಹಾಯ ಮಾಡುವ ಉದ್ದೇಶದಿಂದ ದಾಖಲೆಗಳನ್ನು ಸೃಷ್ಟಿ ಮಾಡಿ ಹಾಜರುಪಡಿಸಿ, ಸುಳ್ಳು ಪ್ರಮಾಣಪತ್ರ ಸಲ್ಲಿಸಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

<u>ಪಾಟೀ ಸವಾಲುಃ 1ನೇ ಎದುರುದಾರರು ಏಕ-ಪಕ್ಷೀಯ. ಆದ್ದರಿಂದ ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.</u>

**<u>ಮರು ವಿಚಾರಣೆಃ ಇಲ್ಲ.</u>**

**(ನನ್ನ ಉಕ್ತ ಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಗಣಕಯಂತ್ರದಲ್ಲಿ ಬೆರಳಚ್ಚು ಮಾಡಿಸಲ್ಪಟ್ಟಿದೆ.)**

**(ಓ. ಹೇ. ಕೇ. ಸ.ಇ)**

**3ನೇ ಹೆಚ್ಚುವರಿ ಲಘು ವ್ಯವಹಾರಗಳ**
**ನ್ಯಾಯಾಧೀಶರು, ಬೆಂಗಳೂರು.**